Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

31.01.2025 19.35 hrs

<><*<><>*><>

ಮುಖ್ಯಾಂಶಗಳು

- ಡಿಜಿಟಲ್ ತಂತ್ರಜ್ಞಾನದಲ್ಲಿ ತನ್ನದೇ ಛಾಪು ಮೂಡಿಸಿರುವ ಭಾರತ; ಉಭಯ ಸದನಗಳನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ
- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ನಾಳೆ ೨೦೨೫-೨೬ ನೇ ಸಾಲಿನ ಕೇಂದ್ರ ಬಜೆಟ್ ಮಂಡನೆ
- ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತದ ನೈಜ ಜಿಡಿಪಿ ೬.೪ ರಷ್ಟು ಬೆಳವಣಿಗೆ ನಿರೀಕ್ಷೆ
- ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್; ಫೈನಲ್ ಪ್ರವೇಶಿಸಿದ ಭಾರತದ ವನಿತೆಯರ ತಂಡ

<><*<><>*><>

ಬಡವರು ಮಹಿಳೆಯರು ಮತ್ತು ರೈತರ ಅಭಿವೃದ್ಧಿಗೆ ತಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನದ ಆರಂಭದ ಮೊದಲ ದಿನವಾದ ಇಂದು ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನ ಉದ್ದೇಶಿಸಿ ಇಂದು ಭಾಷಣ ಮಾಡಿದ ರಾಷ್ಟ್ರಪತಿ, ಸಬ್ ಕಾ ಸಾತ್, ಸಬ್ ಕಾ ವಿಕಾಸ್ ಮಂತ್ರದಲ್ಲಿ ಸರ್ಕಾರಕ್ಕೆ ಸಂಪೂರ್ಣ ವಿಶ್ವಾಸವಿದ್ದು, ದೇಶದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕೆ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು

ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವುದು ಸಂತಸದ ವಿಷಯವಾಗಿದೆ. ಯುದ್ಧ ವಿಮಾನಗಳು, ಪೊಲೀಸ್ ಇಲಾಖೆ ಮತ್ತು ದೇಶದ ಪ್ರಮುಖ ಕಾರ್ಪೋರೇಟ್ ಸಂಸ್ಥೆಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿರುವುದು ಶ್ಲಾಘನೀಯ. ಒಲಂಪಿಕ್ ಕ್ರೀಡೆಗಳಲ್ಲಿ ನಮ್ಮ ಹೆಣ್ಣು ಮಕ್ಕಳು ಹೆಚ್ಚಿನ ಪದಕಗಳನ್ನು ಗಳಿಸುವ ಮೂಲಕ ದೇಶದ ಗರಿಮೆಯನ್ನು ಹೆಚ್ಚಿಸಿದ್ದಾರೆ ಎಂದರು. ಮಧ್ಯಮ ವರ್ಗದವರ ಆಶೋತ್ತರಗಳನ್ನು ಈಡೇರಿಸಲು ಸರ್ಕಾರ ಬದ್ಧವಾಗಿದ್ದು, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಈಗಾಗಲೇ ಮೂರು ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಲು ಕಾರ್ಯಯೋಜನೆ

ರೂಪಿಸಲಾಗಿದೆ. ಮೂರು ಕೋಟಿ ಮಹಿಳೆಯರನ್ನು ಲಕ್‌ಪತಿ ದೀದಿಗಳನ್ನಾಗಿ ಪರಿವರ್ತಿಸಲು ಸರ್ಕಾರ ಮುಂದಾಗಿದೆ ಎಂದರು. ಡಿಜಿಟಲ್ ತಂತ್ರಜ್ಞಾನದಲ್ಲಿ ಭಾರತ ಜಾಗತಿಕ ಭೂಪಟದಲ್ಲಿ ತನ್ನದೇ ಚಾಪು ಮೂಡಿಸಿದೆ. ಯುಪಿಐ ಚಲಾವಣೆ ವ್ಯವಸ್ಥೆಯಲ್ಲಿ ಭಾರತ ಮುಂಚೂಣಿಯಲ್ಲಿದ್ದು, ವಿಶ್ವದ ಇತರ ಅಭಿವೃದ್ಧಿ ಹೊಂದಿದ ದೇಶಗಳ ಸಾಲಿನಲ್ಲಿ ನಿಂತಿದೆ. ಸಾಮಾಜಿಕ ನ್ಯಾಯ ಮತ್ತು ಸಮಾನತೆ ಕಾಯ್ದುಕೊಳ್ಳಲು ಡಿಜಿಟಲ್ ತಂತ್ರಜ್ಞಾನವನ್ನು ಸಾಧನವನ್ನಾಗಿ ಬಳಸಲು ಸರ್ಕಾರ ಮುಂದಾಗಿದೆ ಎಂದರು. ಸರ್ಕಾರ ಆರೋಗ್ಯ ಮತ್ತು ಶಿಕ್ಷಣಕ್ಕೆ ಒತ್ತು ನೀಡಿದೆ. ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಆದ್ಯತೆ ನೀಡಿದೆ. ಒಂದು ದೇಶ ಒಂದು ಚುನಾವಣೆ ಮತ್ತು ವಕ್ಫ್ ತಿದ್ದುಪಡಿ ವಿಧೇಯಕ ಜಾರಿಗೆ ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ ಎಂದು ಅವರು ಹೇಳಿದರು. ನಮ್ಮದೇ ಆದ ಸಂವಿಧಾನವನ್ನು ಅಳವಡಿಸಿಕೊಂಡು ೭೫ ವರ್ಷಗಳಾಗಿದೆ. ಇತ್ತೀಚೆಗಷ್ಟೆ ಸಂವಿಧಾನ ಅಳವಡಿಕೆಯ ೭೫ ವರ್ಷಾಚರಣೆಯನ್ನು ಸಂಭ್ರಮದಿಂದ ಮಾಡಲಾಗಿದೆ ಎಂದರು. ದೇಶದ ಎರಡು ಕೋಟಿ ೨೫ ಲಕ್ಷ ಜನರಿಗೆ ಜನಸ್ವಾಮಿತ್ವ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ. ಆಯುಷ್ಮಾನ್ ಭಾರತ್ ಯೋಜನೆಯಡಿ ೭೦ ವರ್ಷ ತುಂಬಿದ ೬ ಕೋಟಿ ಹಿರಿಯ ಜೀವಗಳಿಗೆ ಆರೋಗ್ಯ ವಿಮೆ ಒದಗಿಸಲು ಸರ್ಕಾರ ನಿರ್ಧರಿಸಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು.

<><*<><>*><>

ನಂತರ ಲೋಕಸಭೆಯಲ್ಲಿ ಮಾತನಾಡಿದ ಸ್ಪೀಕರ್ ಓಂ ಬಿರ್ಲಾ, ದೇಶದ ಅಭಿವೃದ್ಧಿಯಲ್ಲಿ ದಿವಂಗತ ಡಾ. ಮನಮೋಹನ್ ಸಿಂಗ್ ಅವರ ಕೊಡುಗೆಗಳನ್ನು ಸ್ಮರಿಸಿದರು. ಇದೇ ವೇಳೆ ಓಂ ಬಿರ್ಲಾ ಬಿರ್ಲಾ ಅವರು, ಇತ್ತೀಚಿಗೆ ನಿಧನರಾದ ಇತರೆ ಐವರು ಸಂಸತ್ ಸದಸ್ಯರ ಕೊಡುಗೆಗಳನ್ನು ಸ್ಮರಿಸಿದರು. ಬಳಿಕ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ೨೦೨೪-೨೫ ರ ಆರ್ಥಿಕ ಸಮೀಕ್ಷೆಯನ್ನು ಸದನದಲ್ಲಿ ಮಂಡಿಸಿದರು. ನಂತರ ಸದನವನ್ನು ನಾಳೆಗೆ ಮುಂದೂಡಲಾಯಿತು. ರಾಜ್ಯಸಭೆಯಲ್ಲೂ ಕೂಡ ಇತ್ತಿಚಿಗೆ ನಿಧನರಾದ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್, ಹರಿಯಾಣದ ಮಾಜಿ ಮುಖ್ಯಮಂತ್ರಿ ಓಂ ಪ್ರಕಾಶ್ ಚೌಟಾಲ ಮತ್ತು ಇತರೆ ಮೂವರು ಮಾಜಿ ಸದಸ್ಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಆರ್ಥಿಕ ಸಮೀಕ್ಷೆಯನ್ನು ಮೇಲ್ಮನೆಯಲ್ಲಿ ಕೂಡ ಮಂಡಿಸಲಾಯಿತು. ನಂತರ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ಇದಕ್ಕೂ ಮುನ್ನ ಉಭಯ ಸದನಗಳಲ್ಲಿ, ಅಮೆರಿಕಾದ ಮಾಜಿ ಅಧ್ಯಕ್ಷ ಜೇಮ್ಸ್ ಅರ್ಲ್ ಕಾರ್ಟರ್ ಜ್ಯೂನಿಯರ್ ಅವರಿಗೆ ಗೌರವ ಸಲ್ಲಿಸಲಾಯಿತು.

<><*<><>*><>

೨೦೨೫ ರ ಹಣಕಾಸು ವರ್ಷದಲ್ಲಿ ಭಾರತದ ನೈಜ ಜಿಡಿಪಿ ೬.೪ ರಷ್ಟು ಬೆಳವಣಿಗೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಅಲ್ಲದೇ, ೨೦೨೬ರ ಹಣಕಾಸು ವರ್ಷದಲ್ಲಿ ಜಿಡಿಪಿ ಶೇಖಡ ೬.೩ ರಿಂದ ೬.೮ ಬೆಳವಣಿಗೆ ಕಾಣಲಿದೆ ಎಂದು ನಿರೀಕ್ಷಿಸಲಾಗಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಇಂದು ಸಂಸತ್ತಿನ ಉಭಯ ಸನದನಗಳಲ್ಲಿ ಮಂಡಿಸಿದ ಆರ್ಥಿಕ ಸಮೀಕ್ಷೆಯಲ್ಲಿ ಈ ವಿಚಾರ ಪ್ರಮುಖವಾಗಿತ್ತು. ಸಮೀಕ್ಷೆಯ ಪ್ರಕಾರ, ಕೃಷಿ ಮತ್ತು ಸೇವಾ ವಲಯದ ಬೆಂಬಲದೊಂದಿಗೆ ದೇಶವು ಸ್ಥಿರವಾದ ಆರ್ಥಿಕ ಬೆಳವಣಿಗೆಯನ್ನು ದಾಖಲಿಸಿದೆ. ಖಾರೀಫ್ ಬೆಳೆಯ ಗರಿಷ್ಠ ಉತ್ಪಾದನೆ ಮತ್ತು ಅನುಕೂಲಕರ ಕೃಷಿ ಪರಿಸ್ಥಿತಿಗಳ ಹಿನ್ನೆಲೆಯಲ್ಲಿ ಗ್ರಾಮೀಣ ಬೇಡಿಕೆ ಸುಧಾರಣೆಗೆ ಸಾಕ್ಷಿಯಾಗಿದೆ.

<><*<><>*><>

ಕೃಷಿಯು ಭವಿಷ್ಯದ ಕ್ಷೇತ್ರವಾಗಿದೆ. ಏಕೆಂದರೆ ಜಿಡಿಪಿ ಬೆಳವಣಿಗೆಯ ದೃಷ್ಟಿಯಿಂದ ಕೃಷಿಯ ಕೊಡುಗೆಯನ್ನು ಶೇಕಡಾ ೦.೭೫ ರಿಂದ ಶೇಕಡಾ ಒಂದು ರಷ್ಟು ಹೆಚ್ಚಿಸಲು ಸಾಕಷ್ಟು ಅವಕಾಶವಿದೆ ಎಂದು ಕೇಂದ್ರ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ.ಅನಂತ್ ನಾಗೇಶ್ವರನ್ ಅಭಿಪ್ರಾಯಪಟ್ಟಿದ್ದಾರೆ. ಸಂಸತ್ತಿನಲ್ಲಿ ಆರ್ಥಿಕ ಸಮೀಕ್ಷೆಯನ್ನು ಮಂಡಿಸಿದ ನಂತರ ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಸೂಕ್ಷ್ಮ ನೀರಾವರಿ ಪ್ರದೇಶವು ಮೂರು ಪಟ್ಟು ಹೆಚ್ಚಾಗಿದೆ. ಮೂಲಸೌಕರ್ಯದ ವಿಷಯಕ್ಕೆ ಸಂಬಂಧಿಸಿದಂತೆ ಭಾರತವು, ಹೊಸ ವಿಮಾನ ನಿಲ್ದಾಣಗಳು, ರೈಲುಗಳು ಮತ್ತು ಬಂದರು ಕ್ಷೇತ್ರಗಳಲ್ಲಿ ಕಡಿಮೆ ಸಮಯದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದೆ ಎಂದು ಹೇಳಿದರು.

<><*<><>*><>

ದೇಶದ ಆಡಳಿತ ನಡೆಸಲು ಜನತೆ ಮೂರನೇ ಬಾರಿಗೆ ತಮ್ಮ ಸರ್ಕಾರಕ್ಕೆ ಜವಾಬ್ದಾರಿ ನೀಡಿದೆ ಮತ್ತು ಈ ಅವಧಿಯ ಮೊದಲ ಪರಿಪೂರ್ಣ ಬಜೆಟ್ ಮಂಡನೆಯಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನ ಆರಂಭಕ್ಕೆ ಮುನ್ನ ನೂತನ ಸಂಸತ್ ಭವನದ ಎದುರು ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಧಾನಿ, ಭಾರತ ಸ್ವಾತಂತ್ರ್ಯ ಗಳಿಸಿ ೨೦೪೭ಕ್ಕೆ ನೂರು ವರ್ಷಗಳನ್ನು ಪೂರೈಸಲಿದ್ದು, ಆ ವೇಳೆಗೆ ವಿಕಸಿತ ಭಾರತ ಕನಸು ನನಸಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

<><*<><>*><>

೨೦೨೫-೨೬ನೇ ಸಾಲಿನ ಕೇಂದ್ರ ಬಜೆಟ್ ನಾಳೆ ಮಂಡನೆಯಾಗಲಿದೆ. ಕೇಂದ್ರ ಬಜೆಟ್ ಮಂಡನೆಯ ಕಾರ್ಯಕಲಾಪವನ್ನು ಕರ್ನಾಟಕದಲ್ಲಿನ ಎಲ್ಲಾ ಆಕಾಶವಾಣಿ ಕೇಂದ್ರಗಳು ನೇರ

ಪ್ರಸಾರ ಮಾಡಲಿವೆ. ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದ ರಾಷ್ಟ್ರೀಯ ವಾರ್ತೆಗಳು ೧.೧೦ರ ಬದಲಾಗಿ ೧.೫೦ಕ್ಕೆ ಪ್ರಸಾರವಾಗಲಿದೆ. ಮಧ್ಯಾಹ್ನದ ಪ್ರದೇಶ ಸಮಾಚಾರ ೨.೩೦ ರಿಂದ ೨.೪೫ರವರೆಗೆ ಪ್ರಸಾರವಾಗಲಿದೆ. ಆಕಾಶವಾಣಿ ಬೆಂಗಳೂರು ಪ್ರಾದೇಶಿಕ ಸುದ್ದಿ ವಿಭಾಗದಿಂದ ನಾಳೆ ರಾತ್ರಿ ೭.೪೫ ರಿಂದ ೮.೪೫ರ ವರೆಗೆ ಕೇಂದ್ರ ಬಜೆಟ್ ಕುರಿತ ನೇರ ಚರ್ಚೆ ಮೂಡಿಬರಲಿದೆ.

<><*<><>*><>

ಕೇಂದ್ರ ಸರ್ಕಾರವು ಪ್ರಾರಂಭಿಸಿರುವ 'ಭಾರತ ದರ್ಶನ ಅಧ್ಯಯನ ಪ್ರವಾಸ ಕಾರ್ಯಕ್ರಮ'ದ ಭಾಗವಾಗಿ ಕರ್ನಾಟಕ ರಾಜ್ಯಕ್ಕೆ ಆಗಮಿಸಿರುವ ಕಾಶ್ಮೀರ ಕಣಿವೆಯ ೩೦ ವಿದ್ಯಾರ್ಥಿಗಳು, ರಾಜಭವನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಇಂದು ಭೇಟಿ ಮಾಡಿದರು. ಈ ವೇಳೆ ಕಾಶ್ಮೀರದ ಎಸ್‌ಎಸ್‌ಬಿ ಅಸಿಸ್ಟೆಂಟ್ ಕಮಾಂಡೆಂಟ್ ಅಂಕಿತ್ ಕುಮಾರ್ ಉಪಸ್ಥಿತರಿದ್ದರು. ಭಾರತ ದರ್ಶನ ಅಧ್ಯಯನ ಪ್ರವಾಸ ಕಾರ್ಯಕ್ರಮವು ಯುವ ವಿದ್ಯಾರ್ಥಿಗಳಿಗೆ ಶ್ರೀಮಂತ ಅನುಭವವನ್ನು ನೀಡಲು ವಿನ್ಯಾಸಗೊಳಿಸಲಾಗಿದೆ. ಇದು ಭಾರತದ ವೈವಿಧ್ಯಮಯ ಸಂಸ್ಕೃತಿಗಳನ್ನು ಅನ್ವೇಷಿಸಲು, ಶ್ರೇಷ್ಠ ನಾಯಕರನ್ನು ಭೇಟಿ ಮಾಡಿ, ಅನುಭವದ ಬಗ್ಗೆ ಮಾಹಿತಿ ಪಡೆಯಲು ಮತ್ತು ದೇಶದ ಪರಂಪರೆ ಮತ್ತು ಅಭಿವೃದ್ಧಿಯ ಬಗ್ಗೆ ವಿಶಾಲ ದೃಷ್ಟಿಕೋನಗಳನ್ನು ಪಡೆಯಲು ಅನುವು ಮಾಡಿಕೊಡುತ್ತದೆ.

<><*<><>*><>

ಮಲೇಷ್ಯಾದ ಕೌಲಾಲಂಪುರದ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನವರ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎರಡನೇ ಸೆಮಿಫೈನಲ್ ಪಂದ್ಯದಲ್ಲಿಂದು ಇಂಗ್ಲೆಂಡ್ ವಿರುದ್ಧ ಭಾರತ ಮಹಿಳಾ ತಂಡ ೯ ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ. ಈ ಮೂಲಕ ಭಾರತ ತಂಡ ಫೈನಲ್ ಪ್ರವೇಶಿಸಿದ್ದು, ಭಾನುವಾರ ನಡೆಯುವ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ. ಸೆಮಿಫೈನಲ್ ಪಂದ್ಯದಲ್ಲಿಂದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೧೩ ರನ್ ಮಾಡಿತು. ಈ ಗುರಿಯನ್ನು ಬೆನ್ನತ್ತಿದ ಭಾರತ ೧೫ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೧೭ ರನ್ ಗಳಿಸಿ, ಗೆಲುವಿನ ನಗೆ ಬೀರಿತು.

<><*<><>*><>

ಜಾರ್ಖಂಡ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿಂದು ನಡೆದ ೧೦ ಮೀಟರ್ ಏರ್ ರೈಫಲ್ ಪಿಸ್ತೂಲ್ ಫೈನಲ್‌ನಲ್ಲಿ ಮಹಾರಾಷ್ಟ್ರದ ಪಾರ್ಥ್ ರಾಕೇಶ್ ಮಾನೆ ೨೫೨.೯

ಅಂಕಗಳೊಂದಿಗೆ ಸ್ವರ್ಣ ಪದಕ ವಿಜೇತರಾಗಿದ್ದಾರೆ. ೨೫೨.೧ ಅಂಕಗಳೊಂದಿಗೆ ಮಹಾರಾಷ್ಟ್ರದವರೇ ಆದ ರುದ್ರಾಂಕ್ಷ್ ಪಾಟೀಲ್ ಬೆಳ್ಳಿ ಹಾಗೂ ಎಸ್‌ಎಸ್‌ಸಿಬಿಯ ಅಂಕುಶ್ ಕಿರಣ್ ಜಾಧವ್ ೨೩೦.೭ ಅಂಕ ಗಳಿಸಿ ಕಂಚು ಪದಕ ಗಳಿಸಿದ್ದಾರೆ. ಮಹಿಳೆಯರ ವೇಟ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ ಬಿಂದ್ಯಾರಾಣಿ ದೇವಿ ೨೦೧ ಕೆಜಿ ತೂಕ ಎತ್ತುವ ಮೂಲಕ ಚಿನ್ನದ ಪದಕ ಗೆದ್ದಿದ್ದಾರೆ. ಇದೇ ವೇಳೆ ಶರಬನಿ ದಾಸ್ ಬೆಳ್ಳಿ, ನೀಲಮ್ ದೇವಿ ಕಂಚಿನ ಪದಕ ಗಳಿಸಿದ್ದಾರೆ. ಮಹಿಳೆಯರ ೭೦ ಕಿಲೋಮೀಟರ್ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಗುಜರಾತ್‌ನ ಮುಸ್ಕಾನ್ ಗುಪ್ತ ಚಿನ್ನ, ಮಹಾರಾಷ್ಟ್ರದ ಪೂಜಾ ಬಾಬನ್ ದಾನೋಲೆ ಬೆಳ್ಳಿ, ಒಡಿಶಾದ ಸ್ವಾತಿ ಸಿಂಗ್ ಕಂಚಿ ಪದಕ ವಿಜೇತರಾಗಿದ್ದಾರೆ. ಖೋ ಖೋ ಪಂದ್ಯದಲ್ಲಿ ದೆಹಲಿ ವಿರುದ್ಧ ಮಹಾರಾಷ್ಟ್ರ ೨೪-೧೬ ಅಂಕಗಳಿಂದ ಜಯ ಸಾಧಿಸಿದೆ.

<><*<><>*><>

ಮಹಾರಾಷ್ಟ್ರದ ಪುಣೆಯಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವಿನ ೪ನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಪ್ರಗತಿಯಲ್ಲಿದೆ. ಟಾಸ್ ಗೆದ್ದ ಇಂಗ್ಲೆಂಡ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ, ಭಾರತ ತಂಡ, ೮.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೭೭ ರನ್ ಮಾಡಿ, ಆಡುತ್ತಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>